# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 56

ಉತ್ತರಿಸಬೇಕಾದ ದಿನಾಂಕ : 29.01.2021.

ಉತ್ತರಿಸಬೇಕಾದ ಸಚಿವರು : ಮಾನ್ಯ ಪಶುಸಂಗೋಪನೆ ಸಚಿವರು.

| ಕ್ರ.ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | 2016-17 ಮತ್ತು 2017-18ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಸಾಲ ಪಡೆದ ಫಲಾನುಭವಿಗಳು ಸಾಲ ಪಡೆದ ಉದ್ದೇಶಕ್ಕಾಗಿ ಬಳಸಿಕೊಳ್ಳದೆ ಕೇವಲ ಸರ್ಕಾರದಿಂದ ಸಿಗುವ ಸಬ್ಸಿಡಿ ಹಣ ಮಾತ್ರ ಪಡೆದುಕೊಂಡು ಸರ್ಕಾರಕ್ಕೆ ಮೋಸ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಅಂತಹ ಫಲಾನುಭವಿಗಳನ್ನು ತನಿಖೆಗೆ ಒಳಪಡಿಸಲಾಗಿದೆಯೇ: ತನಿಖೆ ನಡೆಸುವುದಾದರೆ ಯಾವಾಗ ನಡೆಸಲಾಗುವುದು: | ಬೀದರ್ ಜಿಲ್ಲೆಯಲ್ಲಿ 2014-15, 2015-16 ಮತ್ತು 2016-17ನೇ ಸಾಲಿನಲ್ಲಿ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ನೀಡಿರುವ ಸಹಾಯಧನ ಹಂಚಿಕೆಯಲ್ಲಿ ಅವ್ಯವಹಾರ ಆಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br>ಸದರಿ ಪ್ರಕರಣದಲ್ಲಿ ಭಾಗಿಯಾದ ಆರೋಪಿತ ಅಧಿಕಾರಿಯವರ ವಿರುದ್ಧ ಶಿಸ್ತಿನ ಕ್ರಮಕ್ಕೈಗೊಳ್ಳಲು ಕ್ರಮ ವಹಿಸಲಾಗಿದೆ. ಫಲಾನುಭವಿಗಳನ್ನು ತನಿಖೆಗೆ ಒಳಪಡಿಸಿರುವುದಿಲ್ಲ. ಆರೋಪಿತ ಅಧಿಕಾರಿಯವರ ವಿರುದ್ಧ ಮಾಡಲಾದ ಆರೋಪಗಳು ಸಾಬೀತಾದಲ್ಲಿ ನಿಯಮಾನುಸಾರ ಫಲಾನುಭವಿಗಳನ್ನು ತನಿಖೆಗೆ ಒಳಪಡಿಸಲು ಕ್ರಮವಹಿಸಲಾಗುವುದು. |
| ಆ | ಇದರಲ್ಲಿ ಭಾಗಿಯಾಗಿರುವ ಅಧಿಕಾರಿಗಳ ವಿರುದ್ಧ ಕ್ರಮಕ್ಕೈಗೊಳ್ಳಲಾಗಿದೆಯೇ? (ವಿವರ ನೀಡುವುದು) | ಸದರಿ ಪ್ರಕರಣದಲ್ಲಿ ಭಾಗಿಯಾದ ಆರೋಪಿತ ಅಧಿಕಾರಿಯವರ ವಿರುದ್ಧ ಶಿಸ್ತಿನ ಕ್ರಮಕ್ಕೈಗೊಳ್ಳಲು ದೋಷಾರೋಪಣಾ ಪಟ್ಟಿ (ಅನುಬಂಧ 1 ರಿಂದ 4) ಹಾಗೂ ಕಾರಣ ಕೇಳಿ ತಿಳುವಳಿಕೆ ಪತ್ರವನ್ನು ಜಾರಿಗೊಳಿಸಲಾಗಿದೆ. ಆರೋಪಿತ ಅಧಿಕಾರಿಯವರು ಸಲ್ಲಿಸಿರುವ ಲಿಖಿತ ರಕ್ಷಣಾ ಹೇಳಿಕೆಗಳನ್ನು ಪರಿಶೀಲಿಸಿ ನಿಯಮಾನುಸಾರ ಮುಂದಿನ ಕ್ರಮವಹಿಸಲಾಗುವುದು. |

ಪಸಂಮೀ ಇ-12 ಸಲೆವಿ 2021

ಪ್ರಭು ಬಿ. ಚವ್ಹಾಣ್
ಪಶುಸಂಗೋಪನೆ ಸಚಿವರು